# ರಾಷ್ಟ್ರೀಯ ಮೌಲ್ಯೀಕರಣ ಮತ್ತು ಮಾನ್ಯತಾ ಪರಿಷತ್ತು (ನ್ಯಾಕ್)

## ಕನ್ನಡ ರಾಜ್ಯೋತ್ಸವ ಆಚರಣೆ- ವರದಿ

ಕನ್ನಡ ರಾಜ್ಯೋತ್ಸವ ಆಚರಣೆ ಪ್ರಯುಕ್ತ ಕನ್ನಡ ಅನುಷ್ಠಾನ ವಿಭಾಗದಿಂದ ಕಾರ್ಯಕ್ರಮವನ್ನು **೦೬ನೇ ನವೆಂಬರ್ ೨೦೧೯** ರ ಸಂಜೆ ನ್ಯಾಕ್ ಸಂಸ್ಥೆಯ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪ್ರೊ. ಎಚ್.ಎಸ್. ಲಕ್ಷ್ಮೀನಾರಾಯಣ ಭಟ್ಟರು ಮತ್ತು ಶ್ರೀ ಎಂ.ವಿ. ಶೇಷಾದ್ರಿ ಅವರು ಭಾಗವಹಿಸಿದ್ದರು. ನ್ಯಾಕ್ ಸಂಸ್ಥೆಯ ನಿರ್ದೇಶಕರಾದ ಪ್ರೊ. ಎಸ್. ಸಿ. ಶರ್ಮ ರವರು ಅತಿಥಿಗಳಿಗೆ ಸನ್ಮಾನ ಮಾಡಿದರು. ನಂತರ ನಿರ್ದೇಶಕರು ಅತಿಥಿಗಳನ್ನು ಕುರಿತು ಮಾತನಾಡುತ್ತಾ ಸರೋಜಿನಿ ಮಹಿಷಿ ವರದಿಯನ್ನು ಪ್ರಸ್ತಾಪಿಸಿದರು. ನ್ಯಾಕ್ ಸಂಸ್ಥೆಯಲ್ಲಿ ಕನ್ನಡ ಕಲಿಕಾ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಎಲ್ಲರೂ ಸಹಕಾರ ನೀಡಿದ್ದು, ಕನ್ನಡ ಅಭಿವೃದ್ಧಿಗೆ ಹೆಚ್ಚು ಮಹತ್ವವನ್ನು ನೀಡಿದ್ದೇವೆ ಎಂದು ತಿಳಿಸಿದರು.




'ಕಗ್ಗದ ಭಟ್ಟರು' ಎಂದೇ ಜನಪ್ರಿಯರಾದ **ಪ್ರೊ. ಎಚ್.ಎಸ್. ಲಕ್ಷ್ಮೀನಾರಾಯಣ ಭಟ್ಟರು** ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಇವರು ವಯಸ್ಕರ ಶಿಕ್ಷಣ, ಸಮಾಜ ಸೇವೆ, ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನದ ಅವಶ್ಯಕತೆಯ ಬಗ್ಗೆ ತಿಳಿಸಿದರು. ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಕರ ಪಾತ್ರ ಎಷ್ಟು ಮುಖ್ಯ ಎಂಬುದನ್ನು ತಿಳಿಸಿಕೊಟ್ಟರು. ಶಿಕ್ಷಣ ಕ್ಷೇತ್ರಗಳಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಬೇಕು. ಉದ್ಯೋಗಾಕಾಂಕ್ಷಿಗಳಿಗೆ ಶಿಕ್ಷಣ ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳುವಂತೆ ಒತ್ತಿ ಹೇಳಿದರು.




ಭಾಷಾವಾರು ಪ್ರಾಂತ್ಯಗಳನ್ನು ಸೃಷ್ಟಿಸಿದರ ಬಗ್ಗೆ ಚರ್ಚಿಸುತ್ತಾ, ಅಲ್ಲಿಯ ಪ್ರಾಂತೀಯ ಭಾಷೆಗೆ ಹೆಚ್ಚು ಪ್ರಾಮುಖ್ಯತೆಯನ್ನು ನೀಡಬೇಕು ಎಂದು ತಿಳಿಸಿದರು. ತ್ರಿಭಾಷಾ ಸೂತ್ರವನ್ನು ಪ್ರಸ್ತಾಪಿಸಿ ಮೂರು ಭಾಷೆಗಳಿಗೂ ಮಹತ್ವವನ್ನು ನೀಡಬೇಕು ಎಂದು ಹೇಳಿದರು. ಮುಂದುವರೆಸಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು, ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತರು, ಇತರ ಕವಿಗಳು, ಲೇಖಕರು ನೀಡಿದ ಕೊಡುಗೆಗಳನ್ನು ನೆನೆಪಿಸಿಕೊಳ್ಳುತ್ತಾ ಕನ್ನಡ ಭಾಷೆಯ ಮಹತ್ವವನ್ನು ತಿಳಿಸಿದರು.

**ಶ್ರೀ ಎಂ.ವಿ. ಶೇಷಾದ್ರಿಯವರು** ಮಾತನಾಡುತ್ತಾ, ಸ್ಪರ್ಧಾ ಜಗತ್ತಿನಲ್ಲಿ ವಿದ್ಯಾರ್ಥಿಗಳು ತಮ್ಮನ್ನು ಹೆಚ್ಚು ತೊಡಗಿಸಿಕೊಳ್ಳಬೇಕು ಹಾಗೂ ಕೆನರಾಬ್ಯಾಂಕ್ ಈ ನಿಮಿತ್ತ ಎಲ್ಲ ಡಿಗ್ರಿ ಓದಿದ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ಕೊಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದು ಹೆಚ್ಚಿನ ಜನರು ಈ ಕಾರ್ಯಕ್ರಮದ ಪ್ರಯೋಜನ ಪಡೆಯಲಿ ಎಂದು ಹೇಳಿದರು.




ಕನ್ನಡ ರಾಜ್ಯೋತ್ಸವ ಆಚರಣೆ ಪ್ರಯುಕ್ತ ನ್ಯಾಕ್ ಸಂಸ್ಥೆಯಲ್ಲಿ ಪ್ರಥಮ ಬಾರಿಗೆ ಪ್ರಬಂಧ ಸ್ಪರ್ಧೆ, ರಸಪ್ರಶ್ನೆ ಮತ್ತು ಕನ್ನಡ ಗೀತಗಾಯನ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಈ ಸ್ಪರ್ಧೆಗಳಲ್ಲಿ ಭಾಗವಹಿಸಿದವರಿಗೆ ಬಹುಮಾನವಾಗಿ ಕನ್ನಡ ಪುಸ್ತಕ ಮತ್ತು ಪ್ರಮಾಣ ಪತ್ರಗಳನ್ನು ನೀಡಲಾಯಿತು.

 

 

ಕೊನೆಯಲ್ಲಿ ಶ್ರೀ ಎನ್. ಉಮಾಶಂಕರ್ ಅವರು ವಂದನಾರ್ಪಣೆಯನ್ನು ಮಾಡಿದರು. ಈ ಕಾರ್ಯಕ್ರಮದ ನಿರೂಪಣೆಯನ್ನು ಕೆ. ರವಿಕುಮಾರ್ ಅವರು ಮಾಡಿದರು.



ಈ ಕಾರ್ಯಕ್ರಮವನ್ನು ಕನ್ನಡ ಅನುಷ್ಠಾನ ವಿಭಾಗದಿಂದ ಏರ್ಪಡಿಸಲಾಗಿತ್ತು. ಡಾ. ಗಣೇಶ್ ಹೆಗಡೆ, ಶ್ರೀ ಚಂದ್ರಶೇಖರ್, ಶ್ರೀ ರಾಮಪ್ಪ ಹಾಗೂ ಶ್ರೀಮತಿ ಸುನೀತಾ ಇವರು ಈ ಕಾರ್ಯಕ್ರಮದ ಜವಾಬ್ದಾರಿಯನ್ನು ವಹಿಸಿದ್ದರು.